ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ –೧೬೦	ಬೆಂಗಳೂರು, ಬುಧವಾರ, ೧೦ ಸೆಪ್ಟೆಂಬರ್, ೨೦೨೫ (ಭಾದ್ರಪದ ೧೯, ಶಕವರ್ಷ ೧೯೪೭)	ಸಂಚಿಕೆ ೧೭೬
Volume - 160	BENGALURU, WEDNESDAY, 10 SEPTEMBER, 2025 (BHADRAPADA 19, SHAKAVARSHA 1947)	Issue 176

ಭಾಗ ೧

ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಉಡುಪಿ ಜಿಲ್ಲೆ, ಕುಂದಾಪುರ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ನಅಇ 750 ಮೈಅಪ್ರಾ 2008, ದಿನಾಂಕ: 20.12.2008.
2. ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 138 ಮೈಅಪ್ರಾ 2009, ದಿನಾಂಕ:16.06.2009.
3. ಸದಸ್ಯ ಕಾರ್ಯದರ್ಶಿ, ಕುಂದಾಪುರ ಯೋಜನಾ ಪ್ರಾಧಿಕಾರ, ಕುಂದಾಪುರ ರವರ ಪತ್ರ ಸಂಖ್ಯೆ: ಕುಂನಯೋಪಾ/ ಮಾ.ಪ್ಲಾ/ 232/2020-21, ದಿನಾಂಕ:30.12.2021.
4. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು ರವರ ಏಕ ಕಡತ ಸಂಖ್ಯೆ:DTCP-2-MPP-2021-2022.

******

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4(ಎ) ರಡಿ ಕುಂದಾಪುರ ಸ್ಥಳೀಯ ಯೋಜನಾ ಪ್ರದೇಶವೆಂದು ಘೋಷಿಸಿ, ಕ್ರಮ ಸಂಖ್ಯೆ (2) ರ ಸರ್ಕಾರದ ಅಧಿಸೂಚನೆಯಲ್ಲಿ ಸದರಿ ಕುಂದಾಪುರ ಸ್ಥಳೀಯ ಯೋಜನಾ ಪ್ರಾಧಿಕಾರವನ್ನು ರಚಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಪತ್ರದಲ್ಲಿ ಸದಸ್ಯ ಕಾರ್ಯದರ್ಶಿ, ಕುಂದಾಪುರ ಯೋಜನಾ ಪ್ರಾಧಿಕಾರ, ಕುಂದಾಪುರ ಇವರು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 9 ರಿಂದ 12 ರನ್ವಯ ಉಡುಪಿ ಜಿಲ್ಲೆ, ಕುಂದಾಪುರ ಸ್ಥಳೀಯ ಯೋಜನಾ ಪ್ರದೇಶದ ತಾತ್ಕಾಲಿಕ ಮಹಾಯೋಜನೆಯನ್ನು ಸಿದ್ಧಪಡಿಸಿ, ಸದರಿ ಕಾಯ್ದೆಯ ಕಲಂ 13(1) ರನ್ವಯ ಸರ್ಕಾರದ ಅನುಮೋದನೆಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಕುಂದಾಪುರ ನಗರದ ಜನಸಂಖ್ಯೆಯು 2041 ರಲ್ಲಿ ಸುಮಾರು 42000 ಆಗಬಹುದೆಂದು ಅಂದಾಜಿಸಿ ಮಹಾಯೋಜನೆಯನ್ನು ಸಿದ್ಧಪಡಿಸಲಾಗಿದೆ. ಸ್ಥಳೀಯ ಯೋಜನಾ ಪ್ರದೇಶದ ಒಟ್ಟು

1741.74 ಹೆಕ್ಟೇರ್ ವಿಸ್ತೀರ್ಣದಲ್ಲಿ 1278.62 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 885.29 ಹೆಕ್ಟೇರ್ (ಶೇ.69.24), ವಾಣಿಜ್ಯಕ್ಕಾಗಿ 68.72 ಹೆಕ್ಟೇರ್ (ಶೇ.5.37). ಕೈಗಾರಿಕೆಗಾಗಿ 12.00 ಹೆಕ್ಟೇರ್. (ಶೇ.0.94), ಸಾರ್ವಜನಿಕ/ಆರೆ ಸಾರ್ವಜನಿಕ ಉಪಯೋಗಕ್ಕೆ 57.93 ಹೆಕ್ಟೇರ್, (ಶೇ.4.53), ಸಾರ್ವಜನಿಕ ಉಪಯುಕ್ತತೆಗಾಗಿ 13.42 ಹೆಕ್ಟೇರ್, (ಶೇ.1.05), ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 124.95 ಹೆಕ್ಟೇರ್ (ಶೇ.9.77) ಹಾಗೂ ಸಾರಿಗೆ ಮತ್ತು ಸಂಚಾರ ವಲಯಕ್ಕೆ 116.31 ಹೆಕ್ಟೇರ್, (ಶೇ.9.10) ಪ್ರದೇಶವನ್ನು ಮೀಸಲಿಟ್ಟು ಭೂ ಉಪಯೋಗವನ್ನು ನಿಗಧಿಪಡಿಸಲಾಗಿದೆ.

ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ರನ್ವಯ ತಾತ್ಕಾಲಿಕ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 125 ಮೈಅಪ್ರಾ 2022(ಇ),
ಬೆಂಗಳೂರು, ದಿನಾಂಕ:22.08.2025.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಉಡುಪಿ ಜಿಲ್ಲೆ, ಕುಂದಾಪುರ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ರನ್ವಯ ತಾತ್ಕಾಲಿಕ ಅನುಮೋದನೆಯನ್ನು ನೀಡಲಾಗಿದೆ. ಮಹಾಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲತಾ.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ,
(ಅಭಿವೃದ್ಧಿ ಪ್ರಾಧಿಕಾರ ಮತ್ತು ನಯೋಸೇ)
ನಗರಾಭಿವೃದ್ಧಿ ಇಲಾಖೆ.

PR-182

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು ನಗರ ಜಿಲ್ಲೆ, ಯಲಹಂಕ ತಾಲ್ಲೂಕು, ಹೆಸರುಘಟ್ಟ ಹೋಬಳಿ, ಶಿವಕೋಟೆ ಗ್ರಾಮ ಸ.ನಂ.06 ರಲ್ಲಿ 08-00 ಎಕರೆ ಜಮೀನನ್ನು ICTS ಉದ್ದೇಶಕ್ಕಾಗಿ Tata Institute of Fundamental Research ಇವರಿಗೆ ವಿದ್ಯುನ್ಮಾನ ಮಾಹಿತಿ, ಜೈವಿಕ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ಹಾಗೂ Quantum City ಹಾಗೂ ಇತರೆ ಉದ್ದೇಶಗಳಿಗೆ 06-17 ಎಕರೆ/ಗುಂಟೆ ಜಮೀನನ್ನು ವಿದ್ಯುನ್ಮಾನ ಮಾಹಿತಿ, ಜೈವಿಕ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ: 1. ಅಧ್ಯಕ್ಷರು, Atomic Energy Commission & Secretary, Department of Atomic Energy, ಭಾರತ ಸರ್ಕಾರ ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: 17-2025, ದಿನಾಂಕ: 03.02.2025.

2. ಜಿಲ್ಲಾಧಿಕಾರಿ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಇವರ ಕಡತ ಸಂಖ್ಯೆ: Comp. No.:1760400 File No.:BUDC-LND0YLK/80/2025-LND YLK-BUR-DC OFFICE.
3. ಜಿಲ್ಲಾಧಿಕಾರಿಯವರ ಕಡತ ಸಂಖ್ಯೆ: 1726067 File No.:BUDC-LND0YLK/74/2025-LND YLK-BUR-DC OFFICE.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ ದಿನಾಂಕ: 14.08.2025.

<u>ಪ್ರಸ್ತಾವನೆ</u>:

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ಪತ್ರದಲ್ಲಿ ಅಧ್ಯಕ್ಷರು, Atomic Energy Commission & Secretary, Department of Atomic Energy, ಭಾರತ ಸರ್ಕಾರ ಇವರು International Centre for Theoretical Sciences ವಿಸ್ತರಿಸುವ ಉದ್ದೇಶಕ್ಕಾಗಿ Tata Institute of Fundamental Research ಇವರಿಗೆ ICTS ಆವರಣಕ್ಕೆ ಹೊಂದಿಕೊಂಡಿರುವ ಹೆಸರಘಟ್ಟ ಹೋಬಳಿ, ಶಿವಕೋಟೆ ಸ.ನಂ. 6ರಲ್ಲಿನ 14-07 ಎಕರೆ/ಗುಂಟೆ ಹಾಗೂ ಸ.ನಂ. 151ರಲ್ಲಿ 05-01 ಎಕರೆ/ಗುಂಟೆ ಒಟ್ಟು 19-08 ಎಕರೆ/ಗುಂಟೆ ಜಮೀನನ್ನು ಮಂಜೂರು ಮಾಡುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ಪ್ರಸ್ತಾವನೆಯಲ್ಲಿ ಬೆಂಗಳೂರು ನಗರ ಜಿಲ್ಲೆ, ಯಲಹಂಕ ತಾಲ್ಲೂಕು, ಹೆಸರುಘಟ್ಟ ಹೋಬಳಿ, ಶಿವಕೋಟೆ ಗ್ರಾಮದ ಸ.ನಂ.06 ರಲ್ಲಿ 12-14 ಎಕರೆ/ಗುಂಟೆ ಸರ್ಕಾರಿ ಗೋಮಾಳ ಜಮೀನು ಮತ್ತು ಸ.ನಂ. 151 ರಲ್ಲಿ 04-13 ಎಕರ/ಗುಂಟೆ ಒಟ್ಟು 16-27 ಎಕರೆ/ಗುಂಟೆ ಜಮೀನನ್ನು ವಿದ್ಯುನ್ಮಾನ ಮಾಹಿತಿ, ಜೈವಿಕ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 71ರಡಿ ಕಾಯ್ದಿರಿಸುವಂತೆ ಜಿಲ್ಲಾಧಿಕಾರಿಯವರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಪ್ರಸ್ತಾವನೆಯಲ್ಲಿ ಬೆಂಗಳೂರು ನಗರ ಜಿಲ್ಲೆ, ಯಲಹಂಕ ತಾಲ್ಲೂಕು, ಹೆಸರಘಟ್ಟ ಹೋಬಳಿ, ಸೊಣೇನಹಳ್ಳಿ ಗ್ರಾಮದ ಸ.ನಂ.78ರಲ್ಲಿ ಆಕಾರ್‌ಬಂದ್‌ನಂತೆ ಒಟ್ಟು ವಿಸ್ತೀರ್ಣ 219-11 ಎ/ಗುಂಟೆ ವಿಸ್ತೀರ್ಣವಿದ್ದು, ಈ ಪೈಕಿ 63-05 ಎ/ಗುಂಟೆ 'ಅ' ಖರಾಬು ಹಾಗೂ 6-04 ಎಕರೆ/ಗುಂಟೆ 'ಬ' ಖರಾಬು ಜಾತಾ ಉಳಿಕೆ 150-02 ಎಕರೆ/ಗುಂಟೆ ಐನು ವಿಸ್ತೀರ್ಣಗಳಿದ್ದು ಮೂಲತಃ ಛತ್ರ ಜೋಡಿ ಇನಾಂ ಜಮೀನಾಗಿದ್ದು, ಸದರಿ 63-05 ಎಕರೆ/ಗುಂಟೆ 'ಅ' ಖರಾಬು ಜಮೀನಿನ ಪೈಕಿ 27-00 ಎಕರೆ ಜಮೀನನ್ನು ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ವಿವಿಧ ಉದ್ದೇಶಗಳಾದ ಬಾಹ್ಯಾಕಾಶ-ತಂತ್ರಜ್ಞಾನ ಮತ್ತು ವಿನ್ಯಾಸ್, ಆಟೋಮೋಟಿವ್ ಮತ್ತು ಪಿನ್‌ಟೆಕ್ ನಂತಹ ವಲಯಗಳಿಗೆ ಉತ್ಕೃಷ್ಟತೆಯ ಕೇಂದ್ರಗಳನ್ನು ಸ್ಥಾಪಿಸಲು ಪರೀಕ್ಷೆ ಮತ್ತು ತಯಾರಿಕೆಗಾಗಿ

ಸಾಮಾನ್ಯ ಮೂಲಸೌಕರ್ಯಗಳುಳ್ಳ ಘಟಕಗಳನ್ನು ಸ್ಥಾಪಿಸಲು ಹಾಗೂ Quantum City ಉದ್ದೇಶಕ್ಕಾಗಿ ಮಂಜೂರು ಮಾಡುವುದರ ಬಗ್ಗೆ ಜಿಲ್ಲಾಧಿಕಾರಿಯವರು ವರದಿ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 14.08.2025ರಂದು ನಡೆದ ಸಭೆಯಲ್ಲಿ ಈ ಪ್ರಸ್ತಾವನೆಗಳನ್ನು ಚರ್ಚಿಸಲಾಗಿದ್ದು, ಅದರಂತೆ ಯಲಹಂಕ ತಾಲ್ಲೂಕು, ಹೆಸರಘಟ್ಟ ಹೋಬಳಿ, ಸೊಣೇನಹಳ್ಳಿ ಗ್ರಾಮದ ಸ.ನಂ.78ರಲ್ಲಿನ ಜಮೀನು ಛತ್ರ ಜೋಡಿ ಇನಾಂ ಜಮೀನಾಗಿದ್ದು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣ ಬಾಕಿ ಇರುವುದರಿಂದ ಸದರಿ ಜಮೀನನ್ನು ಮಂಜೂರು ಮಾಡಲು ಸೂಕ್ತವಾಗದ ಕಾರಣ ಮಂಜೂರಾತಿ ಪ್ರಸ್ತಾವನೆಯನ್ನು ಕೈಬಿಡಲಾಯಿತು.

ಮುಂದುವರಿದು, ಯಲಹಂಕ ತಾಲ್ಲೂಕು, ಹೆಸರುಘಟ್ಟ ಹೋಬಳಿ, ಶಿವಕೋಟೆ ಗ್ರಾಮದ ಸ.ನಂ.06 ರಲ್ಲಿ 14-17 ಎಕರೆ/ಗುಂಟೆ ವಿಸ್ತೀರ್ಣದ ಸರ್ಕಾರಿ ಗೋಮಾಳ ಜಮೀನಿನ ಪೈಕಿ 08-00 ಎಕರೆ ಜಮೀನನ್ನು International Centre for Theoretical Sciences (ICTS) ಸಂಸ್ಥೆಯ ಉದ್ದೇಶಗಳಿಗೆ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ಮಂಜೂರು ಮಾಡಲು ಹಾಗೂ ಉಳಿದ 06-17 ಎಕರೆ/ಗುಂಟೆ ಜಮೀನನ್ನು Quantum City ಹಾಗೂ ಇತರೆ ಉದ್ದೇಶಗಳಿಗೆ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ಮಂಜೂರು ಮಾಡಲು ಸೂಕ್ತವೆಂದು ಪರಿಗಣಿಸಲಾಗಿರುತ್ತದೆ.

ಜಿಲ್ಲಾಧಿಕಾರಿ, ಬೆಂಗಳೂರು ನಗರ ಜಿಲ್ಲೆ ಇವರ ಪ್ರಸ್ತಾವನೆ ಹಾಗೂ ಸಭಾ ನಡವಳಿಯನ್ವಯ ಕೂಲಂಕಷವಾಗಿ ಪರಿಶೀಲಿಸಿ ತೀರ್ಮಾನಿಸಲಾಗಿದೆ. ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: RD-LGB/90/2025, (E-1690754) ಬೆಂಗಳೂರು,

ದಿನಾಂಕ: 03.09.2025.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬೆಂಗಳೂರು ನಗರ ಜಿಲ್ಲೆ, ಯಲಹಂಕ ತಾಲ್ಲೂಕು, ಹೆಸರುಘಟ್ಟ ಹೋಬಳಿ, ಶಿವಕೋಟೆ ಗ್ರಾಮದ ಸ.ನಂ.06 ರಲ್ಲಿ 14-17 ಎಕರೆ/ಗುಂಟೆ ಸರ್ಕಾರಿ ಗೋಮಾಳ ಜಮೀನನ್ನು ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 97(4)ರಡಿಯಲ್ಲಿ ಗೋಮಾಳ ಶೀರ್ಷಿಕೆಯಿಂದ ತಗ್ಗಿಸಿ 08-00 ಎಕರೆ ಜಮೀನನ್ನು International Centre for Theoretical Sciences (ICTS) ಸಂಸ್ಥೆಯ ಉದ್ದೇಶಗಳಿಗೆ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ಹಾಗೂ ಉಳಿದ 06-17 ಎಕರೆ/ಗುಂಟೆ ಜಮೀನನ್ನು Quantum City ಹಾಗೂ ಇತರೆ ಉದ್ದೇಶಗಳಿಗೆ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ

ಇಲಾಖೆಗೆ ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ 22(ಎ)ರ ಉಪನಿಯಮ 3(i)ರನ್ವಯ ಉಚಿತವಾಗಿ ಮಂಜೂರು ಮಾಡಿ ಆದೇಶಿಸಿದೆ.

<u>ಷರತ್ತುಗಳು</u>:

1. ಮಂಜೂರಾದ ಜಮೀನನ್ನು, ಮಂಜೂರು ಮಾಡಲಾಗಿರುವ ಉದ್ದೇಶಕ್ಕಾಗಿಯೇ ಎರಡು ವರ್ಷಗಳ ಅವಧಿಯೊಳಗೆ ಉಪಯೋಗಿಸತಕ್ಕದ್ದು;
2. ಮಂಜೂರಾದ ಜಮೀನನ್ನು ವಿನಾಶಕಾರಿಯಾದ ಅಥವಾ ಖಾಯಂ ಆಗಿ ಹಾನಿಕಾರಕವಾಗುವ ರೀತಿಯಲ್ಲಿ ಬಳಸತಕ್ಕದ್ದಲ್ಲ;
3. ಮಂಜೂರಾದ ಜಮೀನಿನಲ್ಲಿ ಯಾವುದೇ ರೀತಿಯ ಅತಿಕ್ರಮಣವಾಗದಂತೆ ಕ್ರಮವಹಿಸತಕ್ಕದ್ದು;
4. ಮಂಜೂರು ಮಾಡಿರುವ ಜಮೀನಿನ ಮೇಲೆ ಯಾವುದೇ ನ್ಯಾಯಾಲಯದಲ್ಲಿ ದಾವೆಗಳು ದಾಖಲಾಗಿದ್ದಲ್ಲಿ, ಈ ಮಂಜೂರಾತಿಯು ನ್ಯಾಯಾಲಯದ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ;
5. ಮಂಜೂರಾದ ಜಮೀನನ್ನು ಕಂದಾಯ ಇಲಾಖೆಯ ಅನುಮತಿ ಇಲ್ಲದೆ ಮಾರಾಟ ಮಾಡುವುದಾಗಲೀ, ಗುತ್ತಿಗೆ/ ಉಪಗುತ್ತಿಗೆ ನೀಡುವುದಾಗಲೀ, ಅಡಮಾನ, ವರ್ಗಾವಣೆ, ದಾನ, ಇತರೆ ಯಾವುದೇ ರೀತಿಯ ಪರಭಾರೆ ಮಾಡತಕ್ಕದ್ದಲ್ಲ;
6. ಮಂಜೂರಾದ ಜಮೀನಿನ ಯಾವುದೇ ಭಾಗವು ಸಾರ್ವಜನಿಕ ಉದ್ದೇಶಕ್ಕೆ ಅಗತ್ಯವಾಗಿದ್ದಲ್ಲಿ ಸರ್ಕಾರವು ಸದರಿ ಜಮೀನನ್ನು ಪರಿಹಾರ ನೀಡದೇ ಹಿಂತೆಗೆದುಕೊಳ್ಳುವ ಹಕ್ಕನ್ನು ಹೊಂದಿರುತ್ತದೆ;
7. ಮಂಜೂರಾದ ಜಮೀನು ಸಂಸ್ಥೆಗೆ ಅವಶ್ಯವಿಲ್ಲವೆಂದು ಕಂಡುಬಂದಲ್ಲಿ ಕಂದಾಯ ಇಲಾಖೆಗೆ ಹಿಂತಿರುಗಿಸತಕ್ಕದ್ದು;
8. ಮಂಜೂರಾದ ಜಮೀನಿನಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಪ್ರಾರಂಭಿಸುವ ಪೂರ್ವದಲ್ಲಿ ಶಾಸನಬದ್ಧವಾಗಿ ಪಡೆಯಬೇಕಾದ ಪರವಾನಗಿಗಳನ್ನು ಸಂಬಂಧಿತ ಪ್ರಾಧಿಕಾರಗಳಿಂದ ಪಡೆಯತಕ್ಕದ್ದು ಹಾಗೂ ನಿಯಮಾನುಸಾರ ಪಾವತಿಸಬೇಕಾದ ಎಲ್ಲಾ ರೀತಿಯ ಶುಲ್ಕಗಳನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು;
9. ಮಂಜೂರಾದ ಜಮೀನು 1969ರ ಕರ್ನಾಟಕ ಭೂ ಮಂಜೂರಾತಿ ನಿಯಮಗಳಿಗೆ ಬದ್ಧವಾಗಿದ್ದು, ಸದರಿ ನಿಯಮಗಳ ಉಲ್ಲಂಘನೆಯಾದಲ್ಲಿ ಈ ಮಂಜೂರಾತಿ ಆದೇಶ ತನ್ನಷ್ಟಕ್ಕೆ ತಾನೇ ರದ್ದಾಗುವುದು ಹಾಗೂ ಯಾವುದೇ ಪರಿಹಾರ ನೀಡದೇ ಮಂಜೂರಾದ ಜಮೀನನ್ನು ಸರ್ಕಾರದ ವಶಕ್ಕೆ ಪಡೆಯಲಾಗುವುದು;

10. ಜಿಲ್ಲಾಧಿಕಾರಿಗಳು ಮಂಜೂರಾದ ಜಮೀನನ್ನು ಸದರಿ ಸಂಸ್ಥೆಗೆ ಹಸ್ತಾಂತರಿಸುವಾಗ ಮಂಜೂರಾದ ಪ್ರದೇಶದ ವಾಸ್ತವ ಪರಿಸ್ಥಿತಿಗಳನ್ನು ಗಮನದಲ್ಲಿಟ್ಟುಕೊಂಡು ಪೂರಕವಾದ ಷರತ್ತುಗಳನ್ನು ವಿಧಿಸಬಹುದಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮಹಾಂತಯ್ಯ ಎಸ್. ಹೊಸಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ (ಭೂಮಂಜೂರಾತಿ-1).

PR-183

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: **ಶ್ರೀಮತಿ ವಾಣಿ ಎ., ಪ್ರಸ್ತುತ ಸಹಾಯಕರು, ಆರ್ಥಿಕ ಇಲಾಖೆ(BCC), ಕರ್ನಾಟಕ ಸರ್ಕಾರ ಸಚಿವಾಲಯ ಇವರನ್ನು ರಾಷ್ಟ್ರೀಯ ಪಿಂಚಣಿ ಯೋಜನೆಯಿಂದ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸುವ ಕುರಿತು.**

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಆಇ-ಪಿಇಎನ್/99/2023, ದಿನಾಂಕ:24.01.2024.
2. ಸರ್ಕಾರದ ಆದೇಶ ಸಂಖ್ಯೆ:ಆಇ-ಪಿಇಎನ್/99/2023, ದಿನಾಂಕ:14.02.2025.
3. ಸರ್ಕಾರದ ಅಧೀನ ಕಾರ್ಯದರ್ಶಿ (ಆಡಳಿತ-1) ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆರವರ ಅ.ಟಿ. ಸಂಖ್ಯೆ: ಲಾ-ಎಲ್ಎಸಿ/125/2024(1), ದಿನಾಂಕ:11.07.2025.
4. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ-ಪಿಇಎನ್/ 247/2025, ದಿನಾಂಕ:23.06.2025.

ಪ್ರಸ್ತಾವನೆ:

ಮೇಲೆ ಓದಲಾದ (1)ರಲ್ಲಿನ ಸರ್ಕಾರದ ಆದೇಶದಲ್ಲಿ ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ತದನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ನೌಕರರನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೆ ಒಳಪಡಿಸಲು ಸರ್ಕಾರವು ಒಪ್ಪಿರುತ್ತದೆ. ಅದರಂತೆ, ಈ ಆದೇಶದ ವ್ಯಾಪ್ತಿಗೊಳಪಡುವ ಸರ್ಕಾರಿ ನೌಕರರಿಂದ ದಿನಾಂಕ:30.06.2024ರೊಳಗೆ ಅಭಿಮತವನ್ನು ಪಡೆದು ಕ್ರೂಢೀಕೃತ ಪ್ರಸ್ತಾವನೆಯನ್ನು ಸರ್ಕಾರದ ಪರಿಶೀಲನೆಗಾಗಿ ಸಲ್ಲಿಸುವಂತೆ ಸಂಬಂಧಪಟ್ಟ ಇಲಾಖೆಗಳಿಗೆ ನಿರ್ದೇಶನ ನೀಡಲಾಗಿತ್ತು.

ಮೇಲೆ ಓದಲಾದ (2)ರಲ್ಲಿನ ಸರ್ಕಾರದ ಆದೇಶದಲ್ಲಿ ರಾಷ್ಟ್ರೀಯ ಪಿಂಚಣಿ ಯೋಜನೆಯಿಂದ ಡಿಫೈನ್ಡ್ ಪಿಂಚಣಿ ಯೋಜನೆ ವ್ಯಾಪ್ತಿಗೆ ಒಳಪಡುವ ಸರ್ಕಾರಿ ನೌಕರರ ಎನ್.ಪಿ.ಎಸ್. ಪ್ರಾನ್ ಖಾತೆಯಲ್ಲಿನ ಸರ್ಕಾರದ ಹಾಗೂ ನೌಕರರ ವಂತಿಗೆಗಳನ್ನು ಹಿಂಪಡೆದು ಇತ್ಯರ್ಥಪಡಿಸಲು ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ(3)ರಲ್ಲಿನ ಅನಧಿಕೃತ ಟಿಪ್ಪಣಿಯಲ್ಲಿ, ದಿನಾಂಕ:01.04.2006ರ ಪೂರ್ವದಲ್ಲಿ ಖಾಲಿ ಹುದ್ದೆಗಳ ನೇಮಕಾತಿಗಾಗಿ ಅಧಿಸೂಚಿಸಲಾದ ಹುದ್ದೆಗಳಿಗೆ ನಡೆದ ನೇಮಕಾತಿ ಪ್ರಕ್ರಿಯೆಯಲ್ಲಿ ನೇರ ನೇಮಕಾತಿ ಹೊಂದಿ ದಿನಾಂಕ:01.04.2006ರ ನಂತರ ನೇಮಕಾತಿ ಆದೇಶವನ್ನು ಪಡೆದು ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆಯ ಅಧೀನದಲ್ಲಿ ಬರುವ ನ್ಯಾಯಾಲಯಗಳಲ್ಲಿ ಕರ್ತವ್ಯಕ್ಕೆ ಹಾಜರಾಗಿ ನಂತರ ಸಮುಚಿತ ಮಾರ್ಗದಲ್ಲಿ ಇತರೆ ಇಲಾಖೆಗಳಲ್ಲಿ ನೇಮಕಾತಿ ಹೊಂದಿದ ಶ್ರೀಮತಿ ವಾಣಿ ಎ., ಪ್ರಸ್ತುತ ಸಹಾಯಕರು, ಕರ್ನಾಟಕ ಸರ್ಕಾರ ಸಚಿವಾಲಯ ಇವರೂ ಸೇರಿದಂತೆ ಇತರೆ ಇಲಾಖೆಗಳಲ್ಲಿನ ಒಟ್ಟು 172 ಅಧಿಕಾರಿ/ನೌಕರರನ್ನು ರಾಷ್ಟ್ರೀಯ ಪಿಂಚಣಿ ಯೋಜನೆಯಿಂದ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸಲು ಮೇಲೆ ಓದಲಾದ

(4)ರಲ್ಲಿನ ಟಿಪ್ಪಣಿಯಲ್ಲಿ ಆರ್ಥಿಕ ಇಲಾಖೆಯು ಸಹಮತಿಸಿರುವುದಾಗಿ ತಿಳಿಸಿ, ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿಕೊಂಡು, ಸದರಿ ಅಧಿಕಾರಿ/ನೌಕರರುಗಳನ್ನು ಸರ್ಕಾರದ ಆದೇಶ ಸಂಖ್ಯೆ:ಆಇ-ಪಿಇಎನ್/99/2023, ದಿನಾಂಕ:24.01.2024ರನ್ವಯ ರಾಷ್ಟ್ರೀಯ ಪಿಂಚಣಿ ಯೋಜನೆಯಿಂದ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸಿ ಆದೇಶ ಹೊರಡಿಸುವುದರೊಂದಿಗೆ ಅವರ ಎನ್‌ಪಿಎಸ್ ಪ್ರಾನ್ ಖಾತೆಯಲ್ಲಿ ಜಮೆಯಾಗಿರುವ ಸರ್ಕಾರದ ಹಾಗೂ ಅಧಿಕಾರಿ/ನೌಕರರ ವಂತಿಗೆಗಳನ್ನು ಹಿಂಪಡೆದು ಸರ್ಕಾರಿ ಆದೇಶ ಸಂಖ್ಯೆ:ಆಇ-ಪಿಇಎನ್/99/2023, ದಿನಾಂಕ:14.02.2025ರನ್ವಯ ಇತ್ಯರ್ಥಪಡಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಲಾಗಿರುತ್ತದೆ.

ಅದರಂತೆ ಪರಿಶೀಲಿಸಿ, ದಿನಾಂಕ:12.12.2005ರಂದು ಕರ್ನಾಟಕ ಲೋಕ ಸೇವಾ ಆಯೋಗವು ಹುದ್ದೆಗಳ ಭರ್ತಿಗಾಗಿ ಹೊರಡಿಸಿದ ಅಧಿಸೂಚನೆಯನ್ವಯ ದ್ವಿತೀಯ ದರ್ಜೆ ಸಹಾಯಕ ಹುದ್ದೆಗೆ ಅರ್ಜಿ ಸಲ್ಲಿಸಿ, ದಿನಾಂಕ:23.02.2007ರಂದು ಲೋಕಸೇವಾ ಆಯೋಗವು ಹೊರಡಿಸಿದ ಅಂತಿಮ ಆಯ್ಕೆಪಟ್ಟಿಯನ್ವಯ ನಗರ ಸಿವಿಲ್ ನ್ಯಾಯಾಲಯ, ಬೆಂಗಳೂರು ಇಲ್ಲಿನ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ಆಯ್ಕೆ ಹೊಂದಿ, ಸದರಿ ನ್ಯಾಯಾಲಯವು ಹೊರಡಿಸಿದ ದಿನಾಂಕ:25.06.2007ರ ನೇಮಕಾತಿ ಆದೇಶದನ್ವಯ ಕರ್ತವ್ಯ ವರದಿ ಮಾಡಿಕೊಂಡು, ತದನಂತರ ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಕರ್ನಾಟಕ ಸರ್ಕಾರ ಸಚಿವಾಲಯದ ಕಿರಿಯ ಸಹಾಯಕರ ಹುದ್ದೆಗೆ ನೇರ ನೇಮಕಾತಿಯಡಿ ಆಯ್ಕೆಯಾಗಿ, ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 68 ಆಕಿಸೇ 2012, ದಿನಾಂಕ:23.11.2012 ರನ್ವಯ ನೇಮಕಾತಿ ಹೊಂದಿ, ನಿಕಟಪೂರ್ವ ಸಿವಿಲ್ ನ್ಯಾಯಾಲಯದ ಕರ್ತವ್ಯದಿಂದ ದಿನಾಂಕ:07.12.2012ರ ಅಪರಾಹ್ನ ಕ.ನಾ.ಸೇ. ನಿಯಮಾವಳಿಗಳ ನಿಯಮ 252(ಬಿ)ರನ್ವಯ ಬಿಡುಗಡೆಗೊಂಡು ಕರ್ನಾಟಕ ಸರ್ಕಾರ ಸಚಿವಾಲಯದಲ್ಲಿ ದಿನಾಂಕ:10.12.2012ರ ಪೂರ್ವಾಹ್ನದಂದು ಕರ್ತವ್ಯ ವರದಿ ಮಾಡಿಕೊಂಡು ಪ್ರಸ್ತುತ ಕರ್ನಾಟಕ ಸರ್ಕಾರ ಸಚಿವಾಲಯದ ಆರ್ಥಿಕಇಲಾಖೆ(BBC)ಯಲ್ಲಿ ಸಹಾಯಕ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀಮತಿ ವಾಣಿ ಎ., ಇವರನ್ನು ಸರ್ಕಾರದ ಆದೇಶ ದಿನಾಂಕ:24.01.2024ರನ್ವಯ ರಾಷ್ಟ್ರೀಯ ಪಿಂಚಣಿ ಯೋಜನೆಯಿಂದ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 57 ಎಜೆಎಸ್ 2024 (ಭಾ-6),

ಬೆಂಗಳೂರು, ದಿನಾಂಕ:25ನೇ ಆಗಸ್ಟ್ 2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ದಿನಾಂಕ:10.07.2007ರಂದು ರಾಜ್ಯ ಸರ್ಕಾರದ ಸೇವೆಗೆ ಸೇರಿರುವ ಶ್ರೀಮತಿ ವಾಣಿ ಎ., ಸಹಾಯಕರು, ಕರ್ನಾಟಕ ಸರ್ಕಾರ ಸಚಿವಾಲಯ ಇವರನ್ನು ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡಿಸಿ ಆದೇಶಿಸಿದೆ. ಸದರಿ ನೌಕರರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 2-C ಅನ್ವಯಿಸುವುದಿಲ್ಲ. ಆದರೆ, ಇವರಿಗೆ ಅದೇ ನಿಯಮಾವಳಿಯ ಭಾಗ-IV ಅನ್ವಯವಾಗುತ್ತದೆ.

ಸರ್ಕಾರದ ಆದೇಶ ಸಂಖ್ಯೆ:ಆಇ-ಪಿಇಎನ್/99/2023, ದಿನಾಂಕ:14.02.2025ರನ್ವಯ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡುವ ಸದರಿ ನೌಕರರ ಎನ್.ಪಿ.ಎಸ್. ಪ್ರಾನ್ ಖಾತೆಯಲ್ಲಿ ಜಮೆಯಾಗಿರುವ ಸರ್ಕಾರದ ಹಾಗೂ ನೌಕರರ ವಂತಿಗೆಗಳನ್ನು ಹಿಂಪಡೆದು ಇತ್ಯರ್ಥಪಡಿಸಲಾಗುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿಸಂಖ್ಯೆ:ಆಇ-ಪಿಇಎನ್/247/2025, ದಿನಾಂಕ:23.06.2025ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್. ನಾಗರತ್ನ)
ಸರ್ಕಾರದಅಧೀನಕಾರ್ಯದರ್ಶಿ
ಸಿಆಸುಇಲಾಖೆ (ಆಡಳಿತ-2)

PR-184

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: **ಶ್ರೀಮತಿ ಪುಷ್ಪಲತ ಎಲ್., ಹಿರಿಯ ಸಹಾಯಕರು (ರಜಾ ಮೀಸಲಾತಿ), ಇವರನ್ನು ರಾಷ್ಟ್ರೀಯ ಪಿಂಚಣಿ ಯೋಜನೆಯಿಂದ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸುವ ಕುರಿತು.**

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಆಇ-ಪಿಇಎನ್/99/2023, ದಿನಾಂಕ:24.01.2024.
2. ಸರ್ಕಾರದ ಆದೇಶ ಸಂಖ್ಯೆ:ಆಇ-ಪಿಇಎನ್/99/2023, ದಿನಾಂಕ:14.02.2025.
3. ನೌಕರರ ಮನವಿ ದಿನಾಂಕ:07.04.2025.

ಪ್ರಸ್ತಾವನೆ:

ಮೇಲೆ ಓದಲಾದ (1)ರಲ್ಲಿನ ಸರ್ಕಾರದ ಆದೇಶದಲ್ಲಿ ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ತದ ನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ನೌಕರರನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೆ ಒಳಪಡಿಸಲು ಸರ್ಕಾರವು ಒಪ್ಪಿರುತ್ತದೆ. ಅದರಂತೆ, ಈ ಆದೇಶದ ವ್ಯಾಪ್ತಿಗೊಳಪಡುವ ಸರ್ಕಾರಿ ನೌಕರರಿಂದ ದಿನಾಂಕ:30.06.2024ರೊಳಗೆ ಅಭಿಮತವನ್ನು ಪಡೆದು ಕ್ರೂಢೀಕೃತ ಪ್ರಸ್ತಾವನೆಯನ್ನು ಸರ್ಕಾರದ ಪರಿಶೀಲನೆಗಾಗಿ ಸಲ್ಲಿಸುವಂತೆ ಸಂಬಂಧಪಟ್ಟ ಇಲಾಖೆಗಳಿಗೆ ನಿರ್ದೇಶನ ನೀಡಲಾಗಿತ್ತು.

ಮೇಲೆ ಓದಲಾದ (2)ರಲ್ಲಿನ ಸರ್ಕಾರದ ಆದೇಶದಲ್ಲಿ ರಾಷ್ಟ್ರೀಯ ಪಿಂಚಣಿ ಯೋಜನೆಯಿಂದ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆ ವ್ಯಾಪ್ತಿಗೆ ಒಳಪಡುವ ಸರ್ಕಾರಿ ನೌಕರರ ಎನ್.ಪಿ.ಎಸ್. ಪ್ರಾನ್ ಖಾತೆಯಲ್ಲಿನ ಸರ್ಕಾರದ ಹಾಗೂ ನೌಕರರ ವಂತಿಗೆಗಳನ್ನು ಹಿಂಪಡೆದು ಇತ್ಯರ್ಥಪಡಿಸಲು ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.

ಶ್ರೀಮತಿ ಪುಷ್ಪಲತ ಎಲ್., ಹಿರಿಯ ಸಹಾಯಕರು (ರಜಾ ಮೀಸಲಾತಿ), ಕರ್ನಾಟಕ ಸರ್ಕಾರ ಸಚಿವಾಲಯ ಇವರು ದಿನಾಂಕ:24.01.2024ರ ಸರ್ಕಾರದ ಆದೇಶದನ್ವಯ ರಾಷ್ಟ್ರೀಯ ಪಿಂಚಣಿ ಯೋಜನೆಯಿಂದ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಲು ಅರ್ಹರಿದ್ದರೂ ಕಾರಣಾಂತರಗಳಿಂದ ನಿಗದಿತ ಸಮಯದೊಳಗೆ ಸಕ್ಷಮ ನೇಮಕಾತಿ ಪ್ರಾಧಿಕಾರಕ್ಕೆ ತಮ್ಮ ಅಭಿಮತವನ್ನು ಸಲ್ಲಿಸಲು ಸಾಧ್ಯವಾಗದ ಕಾರಣ ದಿನಾಂಕ:19.04.2025ರಂದು ತಮ್ಮನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸಿ ಆದೇಶ ಹೊರಡಿಸುವಂತೆ ಮೇಲೆ ಓದಲಾದ (3)ರಲ್ಲಿ ಸಲ್ಲಿಸಿದ ಮನವಿಯನ್ನು ಪರಿಶೀಲಿಸಿ, ಅವರನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸಲು ಆರ್ಥಿಕ ಇಲಾಖೆಯು ಸಹಮತಿ ನೀಡಿರುತ್ತದೆ.

ಅದರಂತೆ ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಯ ಮೂಲಕ ಆಯ್ಕೆ ಹೊಂದಿ, ಆ ನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ಪ್ರಸ್ತುತ ಕರ್ನಾಟಕ ಸರ್ಕಾರ ಸಚಿವಾಲಯದಲ್ಲಿ ಹಿರಿಯ ಸಹಾಯಕರಾಗಿ (ರಜಾ ಮೀಸಲಾತಿ) ಕರ್ತವ್ಯ ನಿರ್ವಹಿಸುತ್ತಿರುವ ಶ್ರೀಮತಿ ಪುಷ್ಪಲತ ಎಲ್., ಇವರನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 94 ಎಟಿಎಸ್ 2024 (ಭಾಗ-1),
ಬೆಂಗಳೂರು, ದಿನಾಂಕ: 18ನೇ ಆಗಸ್ಟ್ 2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ದಿನಾಂಕ:14.12.2006ರಂದು ರಾಜ್ಯ ಸರ್ಕಾರದ ಸೇವೆಗೆ ಸೇರಿರುವ ಶ್ರೀಮತಿ ಪುಷ್ಪಲತ ಎಲ್., ಹಿರಿಯ ಸಹಾಯಕರು (ರಜಾ ಮೀಸಲಾತಿ), ಕರ್ನಾಟಕ ಸರ್ಕಾರ ಸಚಿವಾಲಯ ಇವರನ್ನು ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡಿಸಿ ಆದೇಶಿಸಿದೆ. ಸದರಿ ನೌಕರರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 2-C ಅನ್ವಯಿಸುವುದಿಲ್ಲ. ಆದರೆ, ಇವರಿಗೆ ಅದೇ ನಿಯಮಾವಳಿಯ ಭಾಗ-IV ಅನ್ವಯವಾಗುತ್ತದೆ.

ಸರ್ಕಾರದ ಆದೇಶ ಸಂಖ್ಯೆ:ಆಇ-ಪಿಇಎನ್/99/2023, ದಿನಾಂಕ:14.02.2025ರನ್ವಯ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡುವ ಸದರಿ ನೌಕರರ ಎನ್.ಪಿ.ಎಸ್. ಪ್ರಾನ್ ಖಾತೆಯಲ್ಲಿ ಜಮೆಯಾಗಿರುವ ಸರ್ಕಾರದ ಹಾಗೂ ನೌಕರರ ವಂತಿಗೆಗಳನ್ನು ಹಿಂಪಡೆದು ಇತ್ಯರ್ಥಪಡಿಸಲಾಗುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:ಆಇ-ಪಿಇಎನ್/307/2025, ದಿನಾಂಕ:06.08.2025 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್. ನಾಗರತ್ನ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಆಸುಇಲಾಖೆ (ಆಡಳಿತ-2)

PR-185

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: **ಶ್ರೀ ಗೋಪಾಲಕೆ.ಜೆ., ಪ್ರಸ್ತುತ ಹಿರಿಯ ಸಹಾಯಕರು, ಆರ್ಥಿಕ ಇಲಾಖೆ(FR & BCC), ಕರ್ನಾಟಕ ಸರ್ಕಾರ ಸಚಿವಾಲಯ ಇವರನ್ನು ರಾಷ್ಟ್ರೀಯ ಪಿಂಚಣಿ ಯೋಜನೆಯಿಂದ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸುವ ಕುರಿತು.**

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಆಇ-ಪಿಇಎನ್/99/2023, ದಿನಾಂಕ:24.01.2024.
2. ಸರ್ಕಾರದ ಆದೇಶ ಸಂಖ್ಯೆ:ಆಇ-ಪಿಇಎನ್/99/2023, ದಿನಾಂಕ:14.02.2025.
3. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ-ಪಿಇಎನ್/ 165/2025, ದಿನಾಂಕ:27.06.2025.

ಪ್ರಸ್ತಾವನೆ:

ಮೇಲೆ ಓದಲಾದ (1)ರಲ್ಲಿನ ಸರ್ಕಾರದ ಆದೇಶದಲ್ಲಿ ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ತದನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ನೌಕರರನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೆ ಒಳಪಡಿಸಲು ಸರ್ಕಾರವು ಒಪ್ಪಿರುತ್ತದೆ. ಅದರಂತೆ, ಈ ಆದೇಶದ ವ್ಯಾಪ್ತಿಗೊಳಪಡುವ ಸರ್ಕಾರಿ ನೌಕರರಿಂದ ದಿನಾಂಕ:30.06.2024ರೊಳಗೆ ಅಭಿಮತವನ್ನು ಪಡೆದು ಕ್ರೂಢೀಕೃತ ಪ್ರಸ್ತಾವನೆಯನ್ನು ಸರ್ಕಾರದ ಪರಿಶೀಲನೆಗಾಗಿ ಸಲ್ಲಿಸುವಂತೆ ಸಂಬಂಧಪಟ್ಟ ಇಲಾಖೆಗಳಿಗೆ ನಿರ್ದೇಶನ ನೀಡಲಾಗಿತ್ತು.

ಮೇಲೆ ಓದಲಾದ (2)ರಲ್ಲಿನ ಸರ್ಕಾರದ ಆದೇಶದಲ್ಲಿ ರಾಷ್ಟ್ರೀಯ ಪಿಂಚಣಿ ಯೋಜನೆಯಿಂದ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆ ವ್ಯಾಪ್ತಿಗೆ ಒಳಪಡುವ ಸರ್ಕಾರಿ ನೌಕರರ ಎನ್.ಪಿ.ಎಸ್. ಪ್ರಾನ್ ಖಾತೆಯಲ್ಲಿನ ಸರ್ಕಾರದ ಹಾಗೂ ನೌಕರರ ವಂತಿಗೆಗಳನ್ನು ಹಿಂಪಡೆದು ಇತ್ಯರ್ಥಪಡಿಸಲು ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.

ಶ್ರೀ ಗೋಪಾಲಕೆ.ಜೆ., ಹಿರಿಯ ಸಹಾಯಕರು, ಆರ್ಥಿಕಇಲಾಖೆ(FR & BCC) ಇವರು ದಿನಾಂಕ:15.06.2024 ರಂದು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೆ ತಮ್ಮನ್ನು ಒಳಪಡಿಸಲು ಕೋರಿ ಸಲ್ಲಿಸಿದ್ದ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರದ ಆದೇಶ ಸಂಖ್ಯೆ:ಆಇ-ಪಿಇಎನ್/99/2023, ದಿನಾಂಕ:24.01.2024ರ 6ನೇ ಷರತ್ತಿನನ್ವಯ ಇವರು ಪ್ರಥಮವಾಗಿ ನೇಮಕಾತಿಯಾಗಿ ಕಾರ್ಯನಿರ್ವಹಿಸಿದ ಇಲಾಖೆಯಾದ ಕ್ಷೇತ್ರ ಶಿಕ್ಷಣಾಧಿಕಾರಿ, ಸಿಂಧನೂರು ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದ್ದು, ಈ ಬಗ್ಗೆ ಸದರಿ ಇಲಾಖೆಯಲ್ಲಿ ಕ್ರಮ ಕೈಗೊಂಡು, ಮುಂದಿನ ಸೂಕ್ತ ಕ್ರಮಕ್ಕಾಗಿ ಉಪನಿರ್ದೇಶಕರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ರಾಯಚೂರು ಇವರಿಗೆ ಪ್ರಸ್ತಾವನೆಯನ್ನು ಕಳುಹಿಸಲಾಗಿರುತ್ತದೆ. ಇವರ ಮನವಿಯು ಈಗಾಗಲೇ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಆಇ-ಪಿಇಎನ್/99/2023, ದಿನಾಂಕ:24.01.2024ರನ್ವಯ ಶಿಕ್ಷಣ ಇಲಾಖೆಯಲ್ಲಿ ಪರಿಶೀಲನೆಯಲ್ಲಿರುವುದರಿಂದ ಈ ಹಂತದಲ್ಲಿ ಸದರಿ ನೌಕರರನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸಿ ಆದೇಶ ಹೊರಡಿಸುವ ಕ್ರಮದ ಬಗ್ಗೆ ಆರ್ಥಿಕ ಇಲಾಖೆಯ ಅಭಿಪ್ರಾಯ ಕೋರಿದ್ದು,

ಅದರನ್ವಯ ಶ್ರೀ ಗೋಪಾಲಕೆ.ಜೆ., ಹಿರಿಯ ಸಹಾಯಕರು ಇವರನ್ನು ದಿನಾಂಕ:24.01.2024ರ ಸರ್ಕಾರಿ ಆದೇಶದನುಸಾರ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೊಳಪಡಿಸಲು ಸಿಆಸು ಇಲಾಖೆಯ ಹಂತದಲ್ಲಿ ಕ್ರಮಕ್ಕೆಗೊಳ್ಳುವಂತೆ ಆರ್ಥಿಕ ಇಲಾಖೆಯು ಮೇಲೆ ಓದಲಾದ (3)ರಲ್ಲಿನ ಹಿಂಬರಹದಲ್ಲಿ ಅಭಿಪ್ರಾಯಿಸಿರುತ್ತದೆ.

ಅದರಂತೆ ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಯ ಮೂಲಕ ಆಯ್ಕೆ ಹೊಂದಿ, ಆ ನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ಪ್ರಸ್ತುತ ಕರ್ನಾಟಕ ಸರ್ಕಾರ ಸಚಿವಾಲಯದ ಆರ್ಥಿಕ ಇಲಾಖೆಯಲ್ಲಿ ಹಿರಿಯ ಸಹಾಯಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ ಗೋಪಾಲಕೆ.ಜೆ., ಇವರನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 60ಎಜೆಎಸ್ 2024,
ಬೆಂಗಳೂರು, ದಿನಾಂಕ:01ನೇ ಆಗಸ್ಟ್ 2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ದಿನಾಂಕ:05.02.2007ರಂದು ರಾಜ್ಯ ಸರ್ಕಾರದ ಸೇವೆಗೆ

ಸೇರಿದ ಶ್ರೀ ಗೋಪಾಲಕೆ.ಜೆ., ಪ್ರಸ್ತುತ ಹಿರಿಯ ಸಹಾಯಕರು ಇವರನ್ನು ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡಿಸಿ ಆದೇಶಿಸಿದೆ. ಸದರಿ ನೌಕರರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 2-C ಅನ್ವಯಿಸುವುದಿಲ್ಲ. ಆದರೆ, ಇವರಿಗೆ ಅದೇ ನಿಯಮಾವಳಿಯ ಭಾಗ-IV ಅನ್ವಯವಾಗುತ್ತದೆ.

ಸರ್ಕಾರದ ಆದೇಶಸಂಖ್ಯೆ:ಆಇ-ಪಿಇಎನ್/99/2023, ದಿನಾಂಕ:14.02.2025ರನ್ವಯ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡುವ ಸದರಿ ನೌಕರರ ಎನ್.ಪಿ.ಎಸ್. ಪ್ರಾನ್ ಖಾತೆಯಲ್ಲಿ ಜಮೆಯಾಗಿರುವ ಸರ್ಕಾರದ ಹಾಗೂ ನೌಕರರ ವಂತಿಗೆಗಳನ್ನು ಹಿಂಪಡೆದು ಇತ್ಯರ್ಥಪಡಿಸಲಾಗುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:ಆಇ-ಪಿಇಎನ್/165/2025, ದಿನಾಂಕ:27.06.2025 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್. ನಾಗರತ್ನ)
ಸರ್ಕಾರದಅಧೀನಕಾರ್ಯದರ್ಶಿ
ಸಿಆಸುಇಲಾಖೆ (ಆಡಳಿತ-2)

PR-186

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: **ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ಅಧಿಕಾರಿ/ನೌಕರರನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸುವ ಕುರಿತು.**

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಆಇ-ಪಿಇಎನ್/99/2023, ದಿನಾಂಕ:24.01.2024.
2. ಸರ್ಕಾರದ ಆದೇಶ ಸಂಖ್ಯೆ:ಆಇ-ಪಿಇಎನ್/99/2023, ದಿನಾಂಕ:14.02.2025.

ಪ್ರಸ್ತಾವನೆ:

ಮೇಲೆ ಓದಲಾದ (1)ರಲ್ಲಿನ ಸರ್ಕಾರದ ಆದೇಶದಲ್ಲಿ ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ತದನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ನೌಕರರನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೆ ಒಳಪಡಿಸಲು ಸರ್ಕಾರವು ಒಪ್ಪಿರುತ್ತದೆ. ಅದರಂತೆ, ಈ ಆದೇಶದ ವ್ಯಾಪ್ತಿಗೊಳಪಡುವ ಸರ್ಕಾರಿ ನೌಕರರಿಂದ ದಿನಾಂಕ:30.06.2024ರೊಳಗೆ ಅಭಿಮತವನ್ನು ಪಡೆದು ಕ್ರೂಢೀಕೃತ ಪ್ರಸ್ತಾವನೆಯನ್ನು ಸರ್ಕಾರದ ಪರಿಶೀಲನೆಗಾಗಿ ಸಲ್ಲಿಸುವಂತೆ ಸಂಬಂಧಪಟ್ಟ ಇಲಾಖೆಗಳಿಗೆ ನಿರ್ದೇಶನ ನೀಡಲಾಗಿತ್ತು.

ಮೇಲೆ ಓದಲಾದ (2)ರಲ್ಲಿನ ಸರ್ಕಾರದ ಆದೇಶದಲ್ಲಿ ರಾಷ್ಟ್ರೀಯ ಪಿಂಚಣಿ ಯೋಜನೆಯಿಂದ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆ ವ್ಯಾಪ್ತಿಗೆ ಒಳಪಡುವ ಸರ್ಕಾರಿ ನೌಕರರ ಎನ್.ಪಿ.ಎಸ್. ಪ್ರಾನ್ ಖಾತೆಯಲ್ಲಿನ ಸರ್ಕಾರದ ಹಾಗೂ ನೌಕರರ ವಂತಿಗೆಗಳನ್ನು ಹಿಂಪಡೆದು ಇತ್ಯರ್ಥಪಡಿಸಲು ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.

ಅದರಂತೆ, ದಿನಾಂಕ:24.01.2024ರ ಸರ್ಕಾರದ ಆದೇಶದನ್ವಯ ಸಂಬಂಧಿತ ಅಧಿಕಾರಿ/ನೌಕರರು ಸಲ್ಲಿಸಿದ ಲಿಖಿತ ಅಭಿಮತವನ್ನು ಪರಿಶೀಲಿಸಿ ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ, ಆ ದಿನಾಂಕದಂದು ಅಥವಾ ನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ಕರ್ನಾಟಕ ಸರ್ಕಾರ ಸಚಿವಾಲಯ ಸೇವೆಯ ರಾಷ್ಟ್ರೀಯ ಪಿಂಚಣಿ ಯೋಜನೆಗೊಳಪಟ್ಟ ಅಧಿಕಾರಿ/ನೌಕರರನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 57 ಎಜೆಎಸ್ 2024,
ಬೆಂಗಳೂರು, ದಿನಾಂಕ:29ನೇ ಮಾರ್ಚ್ 2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಷ್ಟ್ರೀಯ ಪಿಂಚಣಿ ಯೋಜನೆಗೊಳಪಟ್ಟ ಕರ್ನಾಟಕ ಸರ್ಕಾರ ಸಚಿವಾಲಯ ಸೇವೆಗೆ ಸೇರಿದ ಈ ಕೆಳಕಂಡ ಅಧಿಕಾರಿ/ನೌಕರರು ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿರುವುದರಿಂದ ಅವರುಗಳನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡಿಸಿ ಆದೇಶಿಸಿದೆ. ಈ ಅಧಿಕಾರಿ/ನೌಕರರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 2-C ಅನ್ವಯಿಸುವುದಿಲ್ಲ. ಆದರೆ, ಇವರುಗಳಿಗೆ ಅದೇ ನಿಯಮಾವಳಿಯ ಭಾಗ-IV ಅನ್ವಯವಾಗುತ್ತದೆ.

ಕ್ರ.ಸಂ.	**ಅಧಿಕಾರಿ/ನೌಕರರ ಹೆಸರು ಪ್ರಸ್ತುತ ಹುದ್ದೆ ಮತ್ತು ಕಾರ್ಯನಿರ್ವಹಿಸುತ್ತಿರುವ ಇಲಾಖೆ/ಶಾಖೆ (ಶ್ರೀ/ಶ್ರೀಮತಿ)**	**ಎನ್.ಪಿ.ಎಸ್. ಪ್ರಾನ್ ಖಾತೆ ಸಂಖ್ಯೆ**	**ಕೆ.ಜಿ.ಐ.ಡಿ ಸಂಖ್ಯೆ**
1)	**ವಿಜಯಕುಮಾರ ಕೆ.ಎನ್.** ಅಪರ ನಿರ್ದೇಶಕರು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ (ಕನ್ನಡ ಪ್ರಾರೂಪಣಾ ಶಾಖೆ)	110090899852	2186780
2)	**ಹರಿತ ಬಿ.ಎಸ್.** ಸರ್ಕಾರದ ಅಧೀನ ಕಾರ್ಯದರ್ಶಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ಕಾನೂನು ಕೋಶ)	110070898766	2035850
3)	**ಶಿವಕುಮಾರ ಪಿ.** ಶಾಖಾಧಿಕಾರಿ ಸಹಕಾರ ಇಲಾಖೆ (ಎಫ್-ಶಾಖೆ)	110090898815	2023658
4)	**ಜ್ಯೋತಿ ಹೆಗಡೆ** ಶಾಖಾಧಿಕಾರಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-ಇ2)	110090899866	2033525
5)	**ಸುಪ್ರಿಯಾ ಪತ್ತಾರ** ಶಾಖಾಧಿಕಾರಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ (ಸಕ್ಕರೆ)	110050899885	2035849

6)	**ಮಲ್ಲಿಕಾರ್ಜುನ ರೆಡ್ಡಿ ಎನ್.** ಶಾಖಾಧಿಕಾರಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ಆರೋಗ್ಯ-1)	110033066328	02184033
7)	**ಪ್ರವೀಣ ಕುಮಾರ್ ಹಣ್ಣಿ** ಶಾಖಾಧಿಕಾರಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-ಸಿ)	110020898794	2035860
8)	**ಉಪ್ಪಾರ ಭೀಮಣ್ಣ** ಶಾಖಾಧಿಕಾರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ (ಎ-ಶಾಖೆ)	110020898813	2030482
9)	**ಕಲ್ಲೇಶ್ವರಪ್ಪ ಜಿ.** ಶಾಖಾಧಿಕಾರಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ (ಪ್ರಾಥಮಿಕ ಶಿಕ್ಷಣ)	110050898851	2032171
10)	**ಸುಧಾ ಕೆ.** ಶಾಖಾಧಿಕಾರಿ ಆರ್ಥಿಕ ಇಲಾಖೆ (ವೆಚ್ಚ-10)	110090898765	2022621
11)	**ನಾಗರತ್ನ** ಶಾಖಾಧಿಕಾರಿ ಆರ್ಥಿಕ ಇಲಾಖೆ (ವೆಚ್ಚ-4)	110000899820	2035864
ಕ್ರ.ಸಂ.	**ಅಧಿಕಾರಿ/ನೌಕರರ ಹೆಸರು ಪ್ರಸ್ತುತ ಹುದ್ದೆ ಮತ್ತು ಕಾರ್ಯನಿರ್ವಹಿಸುತ್ತಿರುವ ಇಲಾಖೆ/ಶಾಖೆ (ಶ್ರೀ/ಶ್ರೀಮತಿ)**	**ಎನ್.ಪಿ.ಎಸ್. ಪ್ರಾನ್ ಖಾತೆ ಸಂಖ್ಯೆ**	**ಕೆ.ಜಿ.ಐ.ಡಿ ಸಂಖ್ಯೆ**
12)	**ಶಿಲ್ಪಶ್ರೀ ಎನ್.** ಶಾಖಾಧಿಕಾರಿ ಮೂಲಸೌಕರ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ (ಬಂದರು)	110090899821	2022725
13)	**ಈರಪ್ಪ ಕುಮ್ಮೂರ** ಶಾಖಾಧಿಕಾರಿ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ (ಬಿ ಶಾಖೆ)	110043072136	2025211
14)	**ಶ್ರೀವಾಣಿ** ಶಾಖಾಧಿಕಾರಿ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ (ಎಸ್-1, ಲೆಕ್ಕಪತ್ರ)	110010899839	2036867

15)	**ಹೆಚ್.ಬಿ. ಕಿರಣ್ ಕುಮಾರ್** ಶಾಖಾಧಿಕಾರಿ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ (ಅಭಿಪ್ರಾಯ)	110020837817	2186779
16)	**ಮುನಿರಾಜ ಬಿ.ಆರ್.** ಶಾಖಾಧಿಕಾರಿ ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು-ಬಿ)	110050899840	2181562
17)	**ವಿಜಯರಾಘವ ಎನ್.** ಶಾಖಾಧಿಕಾರಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ರಾಜಕೀಯ)	110070899836	2186953
18)	**ಪೀಟರ್ ಡಯಾಸ್** ಶಾಖಾಧಿಕಾರಿ (ನಿಯೋಜನೆ ಮೇರೆಗೆ ಉಪ ಪ್ರಾಚಾರ್ಯರು, ಜಿಲ್ಲಾ ತರಬೇತಿ ಸಂಸ್ಥೆ, ಶಿರಸಿ)	111000898806	2187617
19)	**ರವಿ ಜಿ.ಆರ್.** ಶಾಖಾಧಿಕಾರಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-ಎ)	110050899868	2189416
20)	**ರೇವಪ್ಪ ಖ್ಯಾಡಿ** ಶಾಖಾಧಿಕಾರಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ)	110060898792	2034825
21)	ಮೋ**ಹನ್ ಕುಮಾರ್ ಜೆ.ಎಸ್.** ಶಾಖಾಧಿಕಾರಿ ಮುಖ್ಯ ಚುನಾವಣಾಧಿಕಾರಿಗಳ ಕಛೇರಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಚುನಾವಣೆಗಳು)	110090899835	2034889
22)	**ಮನೋಹರ ವಿ.ಜಿ.** ಶಾಖಾಧಿಕಾರಿ ಕಂದಾಯ ಇಲಾಖೆ (ವಿಶೇಷ ಕೋಶ)	110000899834	2183915
ಕ್ರ.ಸಂ.	**ಅಧಿಕಾರಿ/ನೌಕರರ ಹೆಸರು ಪ್ರಸ್ತುತ ಹುದ್ದೆ ಮತ್ತು ಕಾರ್ಯನಿರ್ವಹಿಸುತ್ತಿರುವ ಇಲಾಖೆ/ಶಾಖೆ (ಶ್ರೀ/ಶ್ರೀಮತಿ)**	**ಎನ್.ಪಿ.ಎಸ್. ಪ್ರಾನ್ ಖಾತೆ ಸಂಖ್ಯೆ**	**ಕೆ.ಜಿ.ಐ.ಡಿ ಸಂಖ್ಯೆ**
23)	**ದತ್ತರಾಜ ಮಠದ** ಶಾಖಾಧಿಕಾರಿ ಆರ್ಥಿಕ ಇಲಾಖೆ (ಲೋಕೋಪಯೋಗಿ ಆರ್ಥಿಕ ಕೋಶ-2)	110020899833	2186930

24)	**ಹರೀಶ್ ಟಿ.ಜೆ.** ಶಾಖಾಧಿಕಾರಿ ನಿಯೋಜನೆ ಮೇಲೆ ರಾಜ್ಯ ಪೊಲೀಸ್ ದೂರುಗಳ ಪ್ರಾಧಿಕಾರ	110040899832	2183777
25)	**ಹೇಮಂತ್ ಕುಮಾರ್ ಕೆ.ಪಿ.** ಶಾಖಾಧಿಕಾರಿ ನಿಯೋಜನೆ ಮೇಲೆ ರಾಜ್ಯ ಪೊಲೀಸ್ ದೂರುಗಳ ಪ್ರಾಧಿಕಾರ	110000899882	2181564
26)	**ಅಭಿನಂದನ್ ಎಸ್.ಆರ್.** ಶಾಖಾಧಿಕಾರಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-ಡಿ)	110030898849	2036478
27)	**ಮಂಜುನಾಥ ಎಂ.ಬಿ.** ಶಾಖಾಧಿಕಾರಿ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಶಾಖೆ	110030898818	2187320
28)	**ಸಚ್ಚಿದಾನಂದಮೂರ್ತಿ ಹೆಚ್.ಎ.** ಶಾಖಾಧಿಕಾರಿ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ (ಎ.ಡಿ.ಬಿ-ಎಸ್4)	110060898811	2023214
29)	**ಉಮೇಶ ಅಮ್ಮಣಗಿ** ಹಿರಿಯ ಸಹಾಯಕರು ಅರಣ್ಯ, ಜೀವಿ ಪರಿಸ್ಥಿತಿ ಹಾಗೂ ಪರಿಸರ ಇಲಾಖೆ (ಪರಿಸರ-ಎ)	110060899831	2033479
30)	**ಗಂಗಪ್ಪ ಹಾನಗಲ್** ಹಿರಿಯ ಸಹಾಯಕರು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ (ಆಂತರಿಕ ಆರ್ಥಿಕ ಸಲಹೆಗಾರರ ಶಾಖೆ)	110021074708	2033480
31)	**ಅಶೋಕ ಕೆ.ಪಿ.** ಹಿರಿಯ ಸಹಾಯಕರು ಲೋಕೋಪಯೋಗಿ ಇಲಾಖೆ (ಸಂಪರ್ಕ-1)	110030898852	2018757
32)	**ಅನುರಾಧಾ ಎಂ.ಆರ್.** ಹಿರಿಯ ಸಹಾಯಕರು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-7, ಕೆ.ಪಿ.ಎಸ್.ಸಿ-ಬಿ)	110040898860	2018756
33)	**ಶಿವಲೀಲ ಗೊಂಚಿಗಾರ್ ಜಿ.ಎಸ್.** ಹಿರಿಯ ಸಹಾಯಕರು ಜಲಸಂಪನ್ಮೂಲ ಇಲಾಖೆ (ತಾಂತ್ರಿಕ-4)	110003113125	2181518
34)	**ಹೇಮಾವತಿ ಬಿ.** ಹಿರಿಯ ಸಹಾಯಕರು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-ಸಿ)	110030898768	2026724

ಕ್ರ.ಸಂ.	ಅಧಿಕಾರಿ/ನೌಕರರ ಹೆಸರು ಪ್ರಸ್ತುತ ಹುದ್ದೆ ಮತ್ತು ಕಾರ್ಯನಿರ್ವಹಿಸುತ್ತಿರುವ ಇಲಾಖೆ/ಶಾಖೆ (ಶ್ರೀ/ಶ್ರೀಮತಿ)	ಎನ್.ಪಿ.ಎಸ್. ಪ್ಯಾನ್ ಖಾತೆ ಸಂಖ್ಯೆ	ಕೆ.ಜಿ.ಐ.ಡಿ ಸಂಖ್ಯೆ
35)	**ಸ್ನೇಹ ಎಸ್. ರಾವ್** ಹಿರಿಯ ಸಹಾಯಕರು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-ಡಿ)	110040899801	2181509
36)	**ಲೇಖಾ ಬಿ.ಜಿ.** ಹಿರಿಯ ಸಹಾಯಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ (ಇ ಶಾಖೆ)	110020898858	2033478
37)	**ಸುಧಾಕರ ಬಿ.ಕೆ.** ಹಿರಿಯ ಸಹಾಯಕರು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-ಸಿ)	110030899824	2184828
38)	**ವೇಣುಗೋಪಾಲ** ಹಿರಿಯ ಸಹಾಯಕರು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ (ಎ ಶಾಖೆ)	110000898814	2181900
39)	**ಶಶಿಕಲ ಆರ್.** ಹಿರಿಯ ಸಹಾಯಕರು ಸಮಾಜ ಕಲ್ಯಾಣ ಇಲಾಖೆ (ಆಂತರಿಕ ಆರ್ಥಿಕ ಸಲಹೆಗಾರರ ಶಾಖೆ)	110020898763	2036485
40)	**ಅನಂತ ಜಿ.ಕೆ.** ಹಿರಿಯ ಸಹಾಯಕರು ಆರ್ಥಿಕ ಇಲಾಖೆ (ವಾಣಿಜ್ಯ ತೆರಿಗೆ-2)	110071739577	2018759
41)	ಮೋ**ಹನ ಹೆಚ್.** ಹಿರಿಯ ಸಹಾಯಕರು ಸಹಕಾರ ಇಲಾಖೆ (ಜಿ ಶಾಖೆ)	110030899774	2025030
42)	**ರೂಪಶ್ರೀ ಬಿ.ಜಿ.** ಹಿರಿಯ ಸಹಾಯಕರು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಲೆಕ್ಕಪತ್ರ-ನಗದು2)	110000898862	2187738
43)	**ವತ್ಸಲ ಕೆ.ಆರ್.** ಹಿರಿಯ ಸಹಾಯಕರು ಒಳಾಡಳಿತ ಮತ್ತು ಸಾರಿಗೆ ಇಲಾಖೆ (ಆಂತರಿಕ ಆರ್ಥಿಕ ಸಲಹೆಗಾರರ ಶಾಖೆ)	110030898866	2032188

44)	**ಕೃಷ್ಣಮೂರ್ತಿ ಎಂ.ಆರ್.** ಹಿರಿಯ ಸಹಾಯಕರು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ರಾಜ್ಯ ಶಿಷ್ಟಾಚಾರ-ವಿದೇಶ ಕೋಶ)	110060898761	2028783
ಕ್ರ.ಸಂ.	**ಅಧಿಕಾರಿ/ನೌಕರರ ಹೆಸರು ಪ್ರಸ್ತುತ ಹುದ್ದೆ ಮತ್ತು ಕಾರ್ಯನಿರ್ವಹಿಸುತ್ತಿರುವ ಇಲಾಖೆ/ಶಾಖೆ (ಶ್ರೀ/ಶ್ರೀಮತಿ)**	**ಎನ್.ಪಿ.ಎಸ್. ಪ್ರಾನ್ ಖಾತೆ ಸಂಖ್ಯೆ**	**ಕೆ.ಜಿ.ಐ.ಡಿ ಸಂಖ್ಯೆ**
45)	**ಮೈನಾವತಿ ಎ.ಆರ್.** ಹಿರಿಯ ಸಹಾಯಕರು ಕೃಷಿ ಇಲಾಖೆ (ಆಂತರಿಕ ಆರ್ಥಿಕ ಸಲಹೆಗಾರರ ಶಾಖೆ)	110030899869	2018758
46)	**ಮಂಜುಳ ಸಿ.** ಹಿರಿಯ ಸಹಾಯಕರು ಆರ್ಥಿಕ ಇಲಾಖೆ (ವಾಣಿಜ್ಯ ತೆರಿಗೆ-1)	111000899776	2035052
47)	**ಪ್ರಿಯಾ ಶರ್ಮ ಆರ್.** ಹಿರಿಯ ಸಹಾಯಕರು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಲೆಕ್ಕಪತ್ರ-1)	110010898867	2181519
48)	**ಹರ್ಷಿತ ಹೆಚ್.ಕೆ.** ಹಿರಿಯ ಸಹಾಯಕರು ಆರ್ಥಿಕ ಇಲಾಖೆ (ವೆಚ್ಚ-12)	110000898764	2032185
49)	**ಹೇಮಲತಾ ಎಂ.ಎಸ್.** ಹಿರಿಯ ಸಹಾಯಕರು ಸಹಕಾರ ಇಲಾಖೆ (ಡಿ ಶಾಖೆ)	110000899851	2036859
50)	**ಸುಕನ್ಯಬಾಯಿ ಎಸ್.ಆರ್.** ಹಿರಿಯ ಸಹಾಯಕರು ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ (ಸೇವೆಗಳು)	110040899877	2035861
51)	**ಶಿವಪ್ಪ** ಹಿರಿಯ ಸಹಾಯಕರು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಚುನಾವಣೆಗಳು)	110070899819	2031073
52)	**ಮಂಜುನಾಥ ಸಿ.ಟಿ.** ಹಿರಿಯ ಸಹಾಯಕರು ಉನ್ನತ ಶಿಕ್ಷಣ ಇಲಾಖೆ (ಯೋಜನೆ)	110070898850	2032145

53)	**ಮಹೇಶ** ಹಿರಿಯ ಸಹಾಯಕರು ಕಂದಾಯ ಇಲಾಖೆ (ಭೂ ಮಂಜೂರಾತಿ-2)	110060899876	2028148
54)	**ರಘು ಆರ್.** ಹಿರಿಯ ಸಹಾಯಕರು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ (ಸಕ್ಕರೆ)	110050898848	2034403
55)	**ರಾಜೇಶ್ ನಾಯ್ಕ ಆರ್.** ಹಿರಿಯ ಸಹಾಯಕರು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ (ಗಣಿ-1)	110040898793	2028334
56)	**ಮಂಜುನಾಥ ಆರ್.ಎಸ್.** ಹಿರಿಯ ಸಹಾಯಕರು ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ (ಹಜ್)	110020901242	2186755

